**ದಿ: 14-10-2019 ರಂದು ವಾದಿ ತಮ್ಮ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದು ಇವರನ್ನು ಪಿಡಬ್ಲ್ಯೂ-1 ಎಂದು ಪರಿಗಣಿಸಲಾಯಿತು.**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಇರುವ ಸಂಗತಿ ಎಲ್ಲಾ ನಿಜ ಇರುತ್ತದೆ ಮತ್ತು ಅದನ್ನು ನಾನೇ ಹೇಳಿ ಬರೆಸಿ ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ. **ಎಂ.ಬಿ.ಬಿ** ವಕೀಲರಿಂದ

ನಾನು ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ 6-ಮುಟೇಷನ್ ರಿಜಿಸ್ಟರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ-1 ರಿಂದ 6 ಎಂದು, ಒಂದು ಮರಣ ಸಮರ್ಥನಾ ಪತ್ರ ಹಾಜರುಪಡಿಸಿದ್ದು ಅದನ್ನು ನಿ.ಪಿ-7 ಎಂದು, ಒಂದು ವಂಶ ವೃಕ್ಷದ ದೃಢೀಕರಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, 17-ಆರ್.ಟಿ.ಸಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿ.ಪಿ-9 ರಿಂದ 25 ಎಂದು, 6-ಕರ ನಿರ್ಧರಣಾ ಪಟ್ಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ-26 ರಿಂದ 31 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ಡಿಕ್ರಿ ಮಾಡಬೇಕೆಂದು ಪ್ರಾರ್ಥನೆ.

ಪಾಟೀ ಸವಾಲುಃ ಶ್ರೀ. **ಜಿ.ಹೆಚ್.ಬಿ** ವಕೀಲರು ಸಮಯಾವಕಾಶ ಕೋರಿರುತ್ತಾರೆ. ಆದ್ದರಿಂದ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ.

ದಿನಾಂಕಃ 14-10-2019.

SD/-

ಹಿರಿಯ ಸಿ ಜೆ ಮತ್ತು ಜೆ. ಎಂ.ಎಫ್. ಸಿ,
ಹಿರೇಕೆರೂರು